# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 454 (372) |
| ಸದಸ್ಯರ ಹೆಸರು | ಡಾ: ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 19.02.2024. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಿಶ್ವವಿದ್ಯಾಲಯಗಳಿಗೆ ಎಸ್‌ಸಿಪಿ/ ಟಿಎಸ್‌ಪಿ ಅಡಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಅನುದಾನವೆಷ್ಟು; (ವಿಶ್ವವಿದ್ಯಾಲಯವಾರು ವಿವರ ನೀಡುವುದು) | ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯ ವಿಶ್ವವಿದ್ಯಾಲಯಗಳಿಗೆ ಎಸ್‌ಸಿಪಿ/ ಟಿಎಸ್‌ಪಿ ಅಡಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಅನುದಾನದ ವಿವರಗಳನ್ನು ಅನುಬಂಧಿಸಿದೆ. |
| ಆ) | ನಿಯಮಾವಳಿ ಪ್ರಕಾರ ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು ವಿಶ್ವವಿದ್ಯಾಲಯಗಳು ಯಾವ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿವೆ; (ವಿವರ ನೀಡುವುದು) | ಸನ್ಮಾನ್ಯ ಮುಖ್ಯಮಂತ್ರಿಗಳು ಮತ್ತು ಅಧ್ಯಕ್ಷರು, ರಾಜ್ಯ ಅನುಸೂಚಿತ ಜಾತಿಗಳ/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಇವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013ರಂತೆ 2022-23 ಮತ್ತು 2023-24ನೇ ಸಾಲಿನ SCSP/TSP ಕಾರ್ಯಕ್ರಮಗಳ ಅನುಮೋದಿತ ಕ್ರಿಯಾಯೋಜನೆಯಂತೆ ಬಳಕೆ ಮಾಡಲಾಗುತ್ತದೆ. ವಿವರ ಈ ಕೆಳಕಂಡಂತಿದೆ;-<br><br>1. ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯಗಳಲ್ಲಿನ ಪ.ಜಾತಿ/ ಪ.ಪಂಗಡದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಊಟದ ವೆಚ್ಚ ಭರಿಸುವುದು.<br>2. ಪಿ.ಹೆಚ್.ಡಿ., ವಿದ್ಯಾರ್ಥಿಗಳಿಗೆ ಮಾಸಿಕ ಗರಿಷ್ಠ ರೂ.10,000/- ಶಿಷ್ಯವೇತನ ನೀಡುವುದು (ವಿಶ್ವವಿದ್ಯಾಲಯ/ಸ್ನಾತಕೋತ್ತರ ಕೇಂದ್ರ/ಸಂಯೋಜಿತ ಇತ್ಯಾದಿ ಕಾಲೇಜುಗಳಲ್ಲಿ ಪಿ.ಹೆಚ್.ಡಿ.,ಗೆ ಆಯ್ಕೆ ಮಾಡಿದ ವಿದ್ಯಾರ್ಥಿಗಳಿಗೆ)<br>3. ಸರ್ಕಾರಿ ಆದೇಶದಂತೆ ಶುಲ್ಕ ಮರುಪಾವತಿ (ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷದಿಂದ ಮೇಲ್ಪಟ್ಟು ರೂ.10.00ಲಕ್ಷದವರೆಗಿನ ವಿದ್ಯಾರ್ಥಿಗಳಿಗೆ ಶೇ.50ರಷ್ಟು ಶುಲ್ಕ ಮರುಪಾವತಿ ಮಾಡುವುದು) |
| ಇ) | ಹಲವಾರು ವಿಶ್ವವಿದ್ಯಾಲಯಗಳಲ್ಲಿ ಎಸ್‌ಸಿಪಿ/ಟಿಎಸ್‌ಪಿ ಅನುದಾನದ ದುರ್ಬಳಕೆ ಮತ್ತು ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಈ) | ಅಂತಹ ವಿಶ್ವವಿದ್ಯಾಲಯಗಳು ಯಾವುವು ಅವುಗಳ ವಿರುದ್ಧ ಕೈಗೊಳ್ಳಲಾದ ಕ್ರಮಗಳೇನು? | ಕುವೆಂಪು ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸ್ಮಾರ್ಟ್ ಕ್ಲಾಸ್‌ರೂಮ್ ಸೌಲಭ್ಯವನ್ನು ಅಳವಡಿಸಲು ವಿಶ್ವವಿದ್ಯಾಲಯದ ಬೇಡಿಕೆಯಂತೆ ರೂ.5.00ಕೋಟಿಗಳನ್ನು ಸಮಾಜ ಕಲ್ಯಾಣ ಇಲಾಖೆಯು ಬಿಡುಗಡೆಗೊಳಿಸಿರುತ್ತದೆ. ಈ |

| | | |
|---|---|---|
| | | ಉದ್ದೇಶಕ್ಕಾಗಿ ಬಿಡುಗಡೆಗೊಳಿಸಲಾದ ಅನುದಾನ ದುರ್ಬಳಕೆಯಾಗಿರುವ ಕುರಿತು ಹಲವಾರು ದೂರುಗಳು ಬಂದ ಹಿನ್ನೆಲೆಯಲ್ಲಿ ಈ ಬಗ್ಗೆ ವರದಿ ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯು ಕೋರಿದ್ದು, ಕುವೆಂಪು ವಿಶ್ವವಿದ್ಯಾಲಯದಲ್ಲಿ ಅನುದಾನ ದುರ್ಬಳಕೆ ಸಂಬಂಧಿಸಿದಂತೆ ಸಮಿತಿಯನ್ನು ರಚಿಸಿ, ತನಿಖೆ ನಡೆಸಿ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಲಾಗಿರುತ್ತದೆ. ಸಮಾಜ ಕಲ್ಯಾಣ ಇಲಾಖೆಯಿಂದ ಬಿಡುಗಡೆಯಾದ ಅನುದಾನ ದುರ್ಬಳಕೆ ಅಕ್ರಮ ನಡೆದಿರುವುದು ಕಂಡುಬಂದಿರುವುದರಿಂದ ಇದಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ SCSP/TSP ಅಧಿನಿಯಮ ಕಲಂ (24)ರನ್ವಯ ಎಫ್ಐಆರ್ ದಾಖಲಿಸಿ ವರದಿ ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯು ಕೋರಿದ್ದು, ಅಂತಹ ಸಿಬ್ಬಂದಿಗಳ ಮೇಲೆ FIR ದಾಖಲಿಸಲು ರಾಜ್ಯಪಾಲರ ಅನುಮೋದನೆ ಕೋರಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಇಡಿ 39 ಹೆಚ್‌ಪಿಯು 2024)

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು

# (ಅನುಬಂಧ)

ಕಳೆದ ಎರಡು ವರ್ಷಗಳಲ್ಲಿ ಆಯವ್ಯಯದಲ್ಲಿ ಹಂಚಿಕೆಯಾಗಿರುವ ಅನುದಾನ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ವಿಶ್ವವಿದ್ಯಾಲಯಗಳ ಹೆಸರು ಮತ್ತು ಲೆಕ್ಕ ಶೀರ್ಷಿಕೆ | ಉಪ ಲೆಕ್ಕ ಶೀರ್ಷಿಕೆ | 2022-23 | 2023-24 |
|---|---|---|---|---|
| 1 | ಕನ್ನಡ ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 26.00 | 34.00 |
| | 2202-03-102-0-06 | 423-ಗಿರಿಜನ ಉಪ ಯೋಜನೆ | 10.00 | 14.00 |
| 2 | ಕುವೆಂಪು ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 8.50 | 00.00 |
| | 2202-03-102-0-08 | 423-ಗಿರಿಜನ ಉಪ ಯೋಜನೆ | 3.50 | 00.00 |
| 3 | ಅಕ್ಕಮಹಾದೇವಿ ಮಹಿಳಾ | 422-ಪರಿಶಿಷ್ಟ ಜಾತಿ ಉಪ ಯೋಜನೆ | 17.00 | 00.00 |
| | ವಿಶ್ವವಿದ್ಯಾಲಯ 2202-03-102-0-22 | 423-ಗಿರಿಜನ ಉಪ ಯೋಜನೆ | 7.00 | 00.00 |
| 4 | ವಿಜಯನಗರ ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 8.50 | 00.00 |
| | 2202-03-102-0-33 | 423-ಗಿರಿಜನ ಉಪ ಯೋಜನೆ | 3.50 | 00.00 |
| 5 | ಬೆಳಗಾವಿ ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 8.50 | 00.00 |
| | 2202-03-102-0-34 | 423-ಗಿರಿಜನ ಉಪ ಯೋಜನೆ | 3.50 | 00.00 |
| 6 | ಜಾನಪದ ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 17.00 | 17.00 |
| | 2202-03-102-0-35 | 423-ಗಿರಿಜನ ಉಪ ಯೋಜನೆ | 7.00 | 7.00 |
| 7 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 422-ಪರಿಶಿಷ್ಟ ಜಾತಿ ಉಪ ಯೋಜನೆ | 17.00 | 00.00 |
| | 2202-03-102-0-40 | 423-ಗಿರಿಜನ ಉಪ ಯೋಜನೆ | 7.00 | 00.00 |

2023-24ನೇ ಆರ್ಥಿಕ ಸಾಲಿನ ಲೆಕ್ಕ ಶೀರ್ಷಿಕೆ: 2202-03-001-0-02-ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ-2013ರಡಿ ಬಳಕೆಯಾಗದ ಉನ್ನತ ಶಿಕ್ಷಣ ಇಲಾಖೆಯಡಿ ಲಭ್ಯವಿರುವ ಅನುದಾನ ರೂ.3.06ಕೋಟಿಗಳನ್ನು ಎಸ್.ಸಿ/ಎಸ್.ಟಿ ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/-ದಂತೆ ಶಿಷ್ಯವೇತನ ನೀಡಲು ಈ ಕೆಳಗಿನ ವಿಶ್ವವಿದ್ಯಾಲಯಗಳಿಗೆ ಬಿಡುಗಡೆಗೊಳಿಸಿ ಆದೇಶಿಲಾಗಿದೆ.

| ಕ್ರ. ಸಂ | ವಿಶ್ವವಿದ್ಯಾಲಯದ ಹೆಸರು | ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು ವಿಶ್ವವಿದ್ಯಾಲಯ (ಜ್ಞಾನಗಂಗೋತ್ರಿ), ಬೆಂಗಳೂರು. | 64.00 |
| 2 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 11.00 |
| 3 | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರ್ಗಿ | 73.00 |
| 4 | ಮೈಸೂರು ವಿಶ್ವವಿದ್ಯಾಲಯ, ಮೈಸೂರು (ಹಿಂದಿನ ಬಾಕಿ) | 86.00 |
| 5 | ಕನ್ನಡ ವಿಶ್ವವಿದ್ಯಾಲಯ, ಹಂಪಿ(ರೂ.4.78 ಕೋಟಿ ಹಿಂದಿನ ಬಾಕಿ ಇರುತ್ತದೆ) | 72.00 |
| | ಒಟ್ಟು | 306.00 |